ಕರ್ನಾಟಕ ವಿಧಾನ ಸಭೆ, ಸಂಶೋಧನಾ ಹಾಗೂ ಉಲ್ಲೇಖನಾ ಶಾಖೆ

**KARNATAKA LEGISLATIVE ASSEMBLY, RESEARCH AND REFERENCE BRANCH**

## ಪತ್ರಿಕಾ ತುಣುಕುಗಳು
## PAPER CLIPPINGS

12

ಇಲಾಖೆ / ವಿಷಯ : DEPARTMENT / SUBJECT: ಕರ್ನಾಟಕ ವಿಧಾನ ಮಂಡಲ ಅಧಿವೇಶನ

ಪತ್ರಿಕೆಯ ಹೆಸರು : NAME OF THE NEWS PAPER: ವಿಜಯ ಕರ್ನಾಟಕ ದಿನಾಂಕ : DATE :19/9/2020

# ಸದಸ್ಯರಿಗೂ ಟೆಸ್ಟ್ ಕಡ್ಡಾಯ

**ಬೆಂಗಳೂರು:** ವಿಧಾನ ಪರಿಷತ್ ಕಲಾಪಕ್ಕೆ ಹಾಜರಾಗುವ ಸದಸ್ಯರು, ಅಧಿಕಾರಿಗಳು ಸೇರಿದಂತೆ ಪ್ರತಿಯೊಬ್ಬರಿಗೂ ಕೋವಿಡ್ ಪರೀಕ್ಷೆ ಕಡ್ಡಾಯಗೊಳಿಸಲಾಗಿದೆ ಎಂದು ಪರಿಷತ್ ಕಾರ್ಯದರ್ಶಿ ಮಹಾಲಕ್ಷ್ಮಿ ತಿಳಿಸಿದ್ದಾರೆ.

ಸುದ್ದಿಗೋಷ್ಠಿಯಲ್ಲಿ ಮಾತನಾಡಿ, "ಸಾಮಾಜಿಕ ಅಂತರ ಕಾಯ್ದುಕೊಂಡು ಕಲಾಪ ನಡೆಸಲು ತೀರ್ಮಾನಿಸಲಾಗಿದೆ. ಶುಚಿತ್ವ ಕಾಪಾಡುವುದಕ್ಕೆ ಒತ್ತು ನೀಡಲಾಗುತ್ತದೆ. ಸಚಿವರು ಹಾಗೂ ಪರಿಷತ್ ಸದಸ್ಯರ ಪಿಎ, ಗನ್ ಮ್ಯಾನ್‌ಗಳು ಮೊದಲ ಮಹಡಿಗೆ ಬರುವಂತಿಲ್ಲ. ಎಲ್ಲರೂ ಕಡ್ಡಾಯವಾಗಿ ಕೋವಿಡ್ ಟೆಸ್ಟ್ ಮಾಡಿಸಿಕೊಳ್ಳಬೇಕು ಎಂದು ತಿಳಿಸಿದರು.



### ಕಾಗೇರಿಗೂ ಪರೀಕ್ಷೆ

ಅಧಿವೇಶನ ಹಿನ್ನೆಲೆಯಲ್ಲಿ ಆರ್‌ಟಿಪಿಸಿಆರ್ ಪರೀಕ್ಷೆಯನ್ನು ವಿಧಾನಸೌಧದಲ್ಲಿ ಆರಂಭಿಸಲಾಗಿದ್ದು, ಸ್ಪೀಕರ್ ವಿಶ್ವೇಶ್ವರ ಹೆಗಡೆ ಕಾಗೇರಿ ಗಂಟಲು ದ್ರವ ನೀಡಿ ಪರೀಕ್ಷೆ ಮಾಡಿಸಿಕೊಂಡರು.